ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	19
ಸದಸ್ಯರ ಹೆಸರು	:	ಶ್ರೀ. ಸುನಿಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	15-02-2022
ಉತ್ತರಿಸುವ ಸಚಿವರು	:	ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಕಲಬುರಗಿ ಜಿಲ್ಲೆಯಲ್ಲಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು; ಸ್ವಂತ ಕಟ್ಟಡಗಳಲ್ಲಿ ಮತ್ತು ಖಾಸಗಿ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಹಾಗೂ ಇತರೆ ಸರ್ಕಾರಿ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು; ವಿದ್ಯುತ್, ನೀರು, ಶೌಚಾಲಯ ವ್ಯವಸ್ಥೆ ಇಲ್ಲದಿರುವ ಅಂಗನವಾಡಿ ಕಟ್ಟಡಗಳ ಸಂಖ್ಯೆ ಎಷ್ಟು; (ಜಿಲ್ಲೆ ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)	ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 3140 ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. ಸ್ವಂತ ಕಟ್ಟಡಗಳಲ್ಲಿ ಮತ್ತು ಖಾಸಗಿ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಹಾಗೂ ಇತರೆ ಸರ್ಕಾರಿ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿಗಳ ಜಿಲ್ಲೆ ಮತ್ತು ತಾಲ್ಲೂಕುವಾರು ವಿವರ ಕೆಳಕಂಡಂತಿದೆ.

ಕ್ರ ಸಂ	ಶಿಶು ಅಭಿವೃದ್ಧಿ ಯೋಜನೆಯ ಹೆಸರು	ಮಂಜೂರಾಗಿರುವ ಅಂಗನವಾಡಿ ಕೇಂದ್ರಗಳು	ಸ್ವಂತ ಕಟ್ಟಡ	ಶಾಲಾ ಕಟ್ಟಡ	ಬಾಡಿಗೆ ಕಟ್ಟಡ	ಇತರೆ ಸರ್ಕಾರಿ ಕಟ್ಟಡ
1	ಅಫಜಲಪೂರ	260	213	12	27	08
2	ಆಳಂದ	421	310	23	73	15
3	ಚಿಂಚೋಳಿ	353	301	14	36	02
4	ಚಿತ್ತಾಪೂರ	263	195	16	45	07
5	ಕಲಬುರಗಿ (ಗ್ರಾ)	416	315	16	69	16
6	ಕಲಬುರಗಿ (ನ)	499	40	0	456	03
7	ಜೇವರ್ಗಿ	355	241	31	71	12
8	ಸೇಡಂ	318	233	21	45	19
9	ಶಹಾಬಾದ	255	163	02	90	0
	ಒಟ್ಟು	3140	2011	135	912	82

ಕಲಬುರಗಿ ಜಿಲ್ಲೆಯ ಎಲ್ಲಾ ಅಂಗನವಾಡಿ ಕೇಂದ್ರಗಳಲ್ಲಿ ವಿದ್ಯುತ್ ಮತ್ತು ನೀರಿನ ವ್ಯವಸ್ಥೆ ಇರುತ್ತದೆ. ಇನ್ನುಳಿದಂತೆ 223 ಅಂಗನವಾಡಿ ಕೇಂದ್ರಗಳಲ್ಲಿ ಶೌಚಾಲಯ ನಿರ್ಮಾಣ ಮಾಡಲು ಅನುದಾನ ಮಂಜೂರಾಗಿದ್ದು, ಕಾಮಗಾರಿ ಪ್ರಾರಂಭಿಸಬೇಕಾಗಿದೆ. ಜಿಲ್ಲೆ ಮತ್ತು ತಾಲ್ಲೂಕುವಾರು ವಿವರ ಕೆಳಕಂಡಂತಿದೆ.

ಕ್ರ ಸಂ	ಶಿಶು ಅಭಿವೃದ್ಧಿ ಯೋಜನೆಯ ಹೆಸರು	ಶೌಚಾಲಯ ಇಲ್ಲದ ಕೇಂದ್ರಗಳು	ವಿದ್ಯುತ್‌ಚ್ಛಕ್ತಿ ಇಲ್ಲದ ಕೇಂದ್ರಗಳು	ನೀರು ಇಲ್ಲದ ಕೇಂದ್ರಗಳು
1	ಅಫಜಲಪೂರ	0	0	0
2	ಆಳಂದ	85	0	0
3	ಚಿಂಚೋಳಿ	14	0	0
4	ಚಿತ್ತಾಪೂರ	53	0	0
5	ಕಲಬುರಗಿ (ಗ್ರಾ)	0	0	0
6	ಕಲಬುರಗಿ (ನ)	7	0	0
7	ಜೇವರ್ಗಿ	45	0	0
8	ಸೇಡಂ	2	0	0
9	ಶಹಾಬಾದ	17	0	0
	ಒಟ್ಟು	223	0	0

ಆ)	ರಾಜ್ಯದಲ್ಲಿ ಸ್ವಂತ ಕಟ್ಟಡವಿಲ್ಲದ ಅಂಗನವಾಡಿಗಳಿಗೆ ವಿದ್ಯುತ್‌ಚ್ಛಕ್ತಿ, ನೀರು ಮತ್ತು ಶೌಚಾಲಯ ವ್ಯವಸ್ಥೆ ಮತ್ತು ಸುಸಜ್ಜಿತವಾದ ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರ ಕ್ರಮ ಜರುಗಿಸುವುದೇ; ಕಾಡಂಚಿನ, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಗಿರಿಜನರ ಮಕ್ಕಳು ಬರುವ ಅಂಗನವಾಡಿ ಕಟ್ಟಡಗಳಿಗೆ ಆದ್ಯತೆ ನೀಡಿ ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗಿದೆ;	ಸರ್ಕಾರದಿಂದ ಪ್ರತಿವರ್ಷ ಅಂಗನವಾಡಿ ಕಟ್ಟಡಗಳ ನಿರ್ವಹಣೆಗಾಗಿ ಘಟಕ ವೆಚ್ಚ ರೂ.1.00 ಲಕ್ಷದಂತೆ ಜಿಲ್ಲಾ ಪಂಚಾಯತ್ ಗಳಿಗೆ ರೂ.10.00 ಕೋಟಿಗಳನ್ನು ಬಿಡುಗಡೆ ಮಾಡಲಾಗುತ್ತಿದೆ. ಮುಂದುವರೆದು, ಆರ್ಥಿಕ ಇಲಾಖೆಯಿಂದ ನೇರವಾಗಿ ತಾಲ್ಲೂಕು ಪಂಚಾಯತ್ ಗಳಿಗೆ ಪ್ರತಿವರ್ಷ ರೂ.25.00 ಕೋಟಿಗಳನ್ನು ಅಂಗನವಾಡಿ ಕಟ್ಟಡಗಳ ದುರಸ್ಥಿಗಾಗಿ ಬಿಡುಗಡೆ ಮಾಡಲಾಗುತ್ತಿದೆ. ಸರ್ಕಾರದಿಂದ ಸುತ್ತೋಲೆ ಹೊರಡಿಸಿ ಸ್ವಂತ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಶೇ. 100 ರಷ್ಟು ಶೌಚಾಲಯ ವ್ಯವಸ್ಥೆ, ವಿದ್ಯುತ್ ಮತ್ತು ಫ್ಯಾನ್ ಸಂಪರ್ಕ ಒದಗಿಸಲು ಸದರಿ ಅನುದಾನವನ್ನು ವಿನಿಯೋಗಿಸಲು ಸೂಚಿಸಲಾಗಿದೆ. ಅಂಗನವಾಡಿ ಕಟ್ಟಡಗಳನ್ನು ನರೇಗಾ ಒಗ್ಗೂಡಿಸುವಿಕೆ, ವಿಶೇಷ ಅಭಿವೃದ್ಧಿ ಯೋಜನೆ , ನಬಾರ್ಡ್ ನ RIDF ವಿವಿಧ ಟ್ರಂಚ್ ಗಳಡಿ ಮತ್ತು ಇಲಾಖಾ ಅನುದಾನದಿಂದ ನಿರ್ಮಾಣ ಮಾಡಲಾಗುತ್ತಿದೆ. ವಿಶೇಷ ಅಭಿವೃದ್ಧಿ ಯೋಜನೆ ಮತ್ತು SCSP ಮತ್ತು TSP ಉಳಿಕೆ ಅನುದಾನಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಠ ಪಂಗಡ ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಕಟ್ಟಡಗಳನ್ನು ನಿರ್ಮಿಸಲಾಗುತ್ತಿದೆ.
ಇ)	ಪ್ರಸ್ತುತ ಎಷ್ಟು ಸ್ವಂತ ಅಂಗನವಾಡಿ ಕಟ್ಟಡಗಳ ನಿರ್ಮಾಣ ಕಾರ್ಯ ನಡೆಯುತ್ತಿದೆ ಪ್ರಸಕ್ತ ಸಾಲಿನಲ್ಲಿ ಎಷ್ಟು ಕಟ್ಟಡಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ?	ಕಳೆದ ಮೂರು ವರ್ಷಗಳಲ್ಲಿ ಮಂಜೂರಾದ ಅಂಗನವಾಡಿ ಕಟ್ಟಡಗಳ ಕಾಮಗಾರಿ ವಿವರ ಈ ಕೆಳಕಂಡಂತಿದೆ.

ಕ್ರ. ಸಂ.	ಯೋಜನೆ	ವರ್ಷ	ಮಂಜೂರಾದ ಅಂಗನವಾಡಿ ಕಟ್ಟಡಗಳ ಸಂಖ್ಯೆ	ಒದಗಿಸಲಾದ ಅನುದಾನ (ರೂ.ಲಕ್ಷಗಳಲ್ಲಿ)
1.	ವಿಶೇಷ ಅಭಿವೃದ್ಧಿ ಯೋಜನೆ	2018–19	92 (92 ಕಟ್ಟಡಗಳ ನಿರ್ಮಾಣ+ 999 ಕಟ್ಟಡಗಳ ಉನ್ನತೀಕರಣ)	3600.00
2.		2019–20	207	3597.50
3.		2020–21	398	2000.00
4.	ನರೇಗಾ ಒಗ್ಗೂಡಿಸುವಿಕೆ	2018–19	156	685.00
5.		2019–20	75	375.00
6.		2020–21	100	500.00
7.	ಆರ್.ಐ.ಡಿ.ಎಫ್–25	2019–20	842	13778.00

		ಪ್ರಸಕ್ತ ಸಾಲಿನಲ್ಲಿ 567 ಕಟ್ಟಡಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದ್ದು ಅನುದಾನ ಈಗಾಗಲೇ ಜಿಲ್ಲೆಗಳಿಗೆ ಬಿಡುಗಡೆಯಾಗಿರುತ್ತದೆ. ವಿವರ ಈ ಕೆಳಕಂಡಂತಿದೆ.

ಕ್ರಸಂ	ಯೋಜನೆ	ಮಂಜೂರಾದ ಅಂಗನವಾಡಿ ಕಟ್ಟಡಗಳ ಸಂಖ್ಯೆ	ಒದಗಿಸಲಾದ ಅನುದಾನ (ರೂ.ಲಕ್ಷಗಳಲ್ಲಿ)
1.	ನರೇಗಾ ಒಗ್ಗೂಡಿಸುವಿಕೆ	100	500.00
2.	ವಿಶೇಷ ಅಭಿವೃದ್ಧಿ ಯೋಜನೆ	400	2000.00
3.	SCP TSP ಉಳಿಕೆ ಅನುದಾನ	9	45.33
4.	ಗ್ರಾಮೀಣಾಭಿವೃದ್ಧಿ ಇಲಾಖೆಯ SCP TSP ಉಳಿಕೆ ಅನುದಾನ	58	638.00

ಸಂಖ್ಯೆ: ಮಮಇ 27 ಐಸಿಡಿ 2022

Halappa BA

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು.